ಅಂಡರ್ ಫೈನಾನ್ಸಿಂಗ್ ಆಗಬಾರದು, ಕೊಲ್ಯಾಟರಲ್ ಸೆಕ್ಯುರಿಟಿಯನ್ನು ಕೇಳಬಾರದು ಎಂದು ಹೇಳಿ ನಾವು ನಿರ್ದೇಶನವನ್ನು ಕೊಟ್ಟಿದ್ದೇವೆ. ಮತ್ತು ರಿಸರ್ವ್ ಬ್ಯಾಂಕ್‌ಗೂ ಕೂಡ ಎಲ್ಲಾ ರಾಷ್ಟ್ರೀಕೃತ ಬ್ಯಾಂಕ್‌ಗಳಿಗೂ ಮತ್ತು ಖಾಸಗಿ ಬ್ಯಾಂಕ್‌ಗಳಿಗೂ ಕೂಡ ನಾವು ನಿರ್ದೇಶನವನ್ನು ಕೊಟ್ಟಿದ್ದೇವೆ.

ಶ್ರೀ ಕಾಗೋಡು ತಿಮ್ಮಪ್ಪ : ಇದು ಒಳ್ಳೆಯದು. ಒಳ್ಳೆಯ ಪ್ರಗತಿಯಲ್ಲಿದೆ. ಅದಕ್ಕಾಗಿಯೇ ಇದನ್ನು ರಾಜ್ಯಮಟ್ಟದಲ್ಲಿ ಮತ್ತು ರಾಜ್ಯಮಟ್ಟದಲ್ಲಿ ಜಿಲ್ಲಾಧಿಕಾರಿಗಳು ಜಿಲ್ಲಾ ಪಂಚಾಯಿತಿಯಿಂದ ಕಾರ್ಯನಿರ್ವಾಹಕ ಅಧಿಕಾರಿಗಳು ಇದನ್ನು ಮಾನಿಟರ್ ಮಾಡುವುದು ಬಹಳ ಅವಶ್ಯಕತೆ ಇದೆ. ಆದುದರಿಂದ ತಾವು ದಯವಿಟ್ಟು ಬ್ಯಾಂಕುಗಳಿಗೆ ನಿಗದಿಪಡಿಸಿರುವ ಹಣಕಾಸು ಗುರಿ ಏನು ಇದೆ, ಅದನ್ನು ಅವರು ಸಾಧಿಸುತ್ತಿದ್ದಾರೆಯೇ ಇಲ್ಲವೇ ಎಂದು ಬ್ಯಾಂಕ್‌ನಿಂದ ಲೆಕ್ಕ ತರಿಸಿಕೊಂಡು ತಾವು ರೆವ್ಯೂ ಮಾಡುವ ಕೆಲಸವನ್ನು ತಾವು ಮಾಡಬೇಕೆಂದು ಹೇಳುತ್ತೇನೆ.

ಶ್ರೀ ಬಿ.ಎ. ಮೊಹಿದ್ದೀನ್ : ತಾವು ಹೇಳಿದಂತಹ ಸಲಹೆಗಳನ್ನು ನಾವು ಗಮನದಲ್ಲಿಟ್ಟುಕೊಂಡು ಕೆಲಸ ಮಾಡುತ್ತೇವೆ. ಇದಕ್ಕೆ ಪೂರಕವಾಗಿ ಇನ್ನೊಂದು ವಿಚಾರ ಹೇಳಬೇಕು. ಅನ್ ಎಂಪ್ಲಾಯ್‌ಮೆಂಟ್ ಸ್ಕೀಮ್ ಬಹಳ ಯಶಸ್ವಿಯಾಗಿ ನಡೆದಿದೆ. 22 ಸಾವಿರ ರೂಪಾಯಿಯನ್ನು ಇಂಡಸ್ಟ್ರೀಯಲ್ ಕಾಸ್ಟ್‌ಗೆಂದು ನೀಡಲಾಗಿದೆ. ಸರ್ವೀಸ್ ಸೆಕ್ಟಾರ್‌ನಲ್ಲಿ ಕರ್ನಾಟಕ ಸರ್ಕಾರ ಏನೇನು ಸೌಕರ್ಯಗಳು ಬೇಕೋ ಅದನ್ನು ಒದಗಿಸಿದೆ.

ಚುಕ್ಕೆ ಗುರ್ತಿಲ್ಲದ ಪ್ರಶ್ನೆಗಳಿಗೆ ಲಿಖಿತ ಮೂಲಕ ನೀಡಲಾದ ಉತ್ತರಗಳು.

ಶ್ರೀ ಡಿ. ಮಂಜುನಾಥ್ (ಅರಣ್ಯ ಸಚಿವರು) : ಮಾನ್ಯ ಅಧ್ಯಕ್ಷರೇ, ದಿನಾಂಕ 13ನೇ ತಾರೀಖು ಮೇ ತಿಂಗಳು ಮಂಡಿಸಬೇಕಾಗಿದ್ದ ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳ 29ನೇ ಪಟ್ಟಿಯಲ್ಲಿನ ಪ್ರಶ್ನೆಗಳನ್ನು ಮಂಡಿಸುತ್ತಿದ್ದೇನೆ. 29ನೇ ಪಟ್ಟಿಯಲ್ಲಿನ 98 ಪ್ರಶ್ನೆಗಳ ಪೈಕಿ 55 ಪ್ರಶ್ನೆಗಳ ಉತ್ತರವನ್ನು ಸಭೆಯ ಮುಂದೆ ಮಂಡಿಸುತ್ತಿದ್ದೇನೆ.

ದಿನಾಂಕ 14.5.1998ರ ಚುಕ್ಕೆ ಗುರುತಿಲ್ಲದ ಪ್ರಶ್ನೋತ್ತರಗಳು.

ಸುಳ್ಯ ತಾಲ್ಲೂಕಿನಲ್ಲಿ ಗಂಗಾ ಕಲ್ಯಾಣ ಯೋಜನೆ

1924 - ಶ್ರೀ ಎಸ್. ಅಂಗಾರ (ಸುಳ್ಯ) : ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಸುಳ್ಯ ತಾಲ್ಲೂಕಿನ ಸುಬ್ರಹ್ಮಣ್ಯ ಗ್ರಾಮದ ಕಲ್ಲುಂದ ಎಂಬಲ್ಲಿ ಗಂಗಾ ಕಲ್ಯಾಣ ಯೋಜನೆಯನ್ನು ಯಾವ ಇಸವಿಯಲ್ಲಿ ಮಂಜೂರು ಮಾಡಲಾಗಿದೆ?*

ಆ) *ಯೋಜನೆಯ ಅಂದಾಜು ಮೊತ್ತವೆಷ್ಟು? ಈವರೆಗೆ ಖರ್ಚು ಮಾಡಲಾದ ಹಣವೆಷ್ಟು?*

ಶ್ರೀ ಕೆ.ಎಂ. ಕೃಷ್ಣಾರೆಡ್ಡಿ (ಸಮಾಜ ಕಲ್ಯಾಣ ಸಚಿವರು) :

ಅ) ಮಂಗಳೂರು ಜಿಲ್ಲಾ ಪಂಚಾಯಿತಿ ನೀಡಿರುವ ಮಾಹಿತಿ ಅನ್ವಯ ಸುಳ್ಯ ತಾಲ್ಲೂಕಿನ ಸುಬ್ರಹ್ಮಣ್ಯ ಗ್ರಾಮದಲ್ಲಿ ಗಂಗಾ ಕಲ್ಯಾಣ ಯೋಜನೆಯನ್ನು 1991-92ನೇ ಇಸವಿಯಲ್ಲಿ ಮಂಜೂರು ಮಾಡಲಾಯಿತು.

ಆ) ಈ ಯೋಜನೆಯ ಅಂದಾಜು ವೆಚ್ಚ ರೂ. 1,31,000 ಆಗಿದ್ದು, ಇದುವರೆಗೆ ಆಗಿರುವ ಖರ್ಚು ರೂ. 1,52,879 ಗಳು.

ಕಾನ, ಬಾಣೆ, ಕುಮ್ಕಿ ಸ್ಥಳದಲ್ಲಿ ಅನಧಿಕೃತವಾಗಿ ಕೃಷಿ ಮಾಡುವವರಿಗೆ ಸ್ಥಳ ಮಂಜೂರು.

1925 - ಶ್ರೀ ಎಸ್. ಅಂಗಾರ (ಸುಳ್ಯ) : ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಕಾನ, ಬಾಣೆ, ಕುಮ್ಕಿ ಸ್ಥಳದಲ್ಲಿ ಅನಧಿಕೃತವಾಗಿ ಅಕ್ರಮ ಪ್ರವೇಶ ಮಾಡಿ ಕೃಷಿ ಮಾಡಿರುವ ವ್ಯಕ್ತಿಗಳಿಗೆ ಅಕ್ರಮ-ಸಕ್ರಮ ಸಮಿತಿಯಲ್ಲಿ ಸ್ಥಳ ಮಂಜೂರು ಮಾಡುವಲ್ಲಿ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?*

ಆ) *ಹಾಗಿದ್ದಲ್ಲಿ ಯಾವಾಗ ಮಂಜೂರು ಮಾಡಲಾಗುವುದು?*

ಇ) *ಈ ಕುರಿತು ಸರ್ಕಾರ ಕೈಗೊಂಡ ಕ್ರಮಗಳಾವುವು?*

ಶ್ರೀ ಬಿ. ಸೋಮಶೇಖರ್ (ಕಂದಾಯ ಸಚಿವರು) :

ಅ) ಬಂದಿದೆ.

ಆ) ಕಾನ, ಬಾಣೆ, ಕುಮ್ಕಿ ಜಮೀನುಗಳು ದಕ್ಷಿಣ ಕನ್ನಡ ಜಿಲ್ಲೆ ಮತ್ತು ಉಡುಪಿ ಜಿಲ್ಲೆಗಳಲ್ಲಿ ಮಾತ್ರ ಇದ್ದು ಭೂ ಕಂದಾಯ ಕಾಯಿದೆ 1964ರ ವಿಧಿ 79(2) ರನ್ವಯ ಸದರಿ ಜಮೀನುಗಳನ್ನು ಅನಧಿಕೃತವಾಗಿ ಸಾಗುವಳಿ ಮಾಡಿರುವ ವ್ಯಕ್ತಿಗಳಿಗೆ ಅಕ್ರಮ-ಸಕ್ರಮ ಸಮಿತಿಯಲ್ಲಿ ಸಕ್ರಮಗೊಳಿಸಲು ಹಾಲಿ ನಿಯಮಗಳಲ್ಲಿ ಅವಕಾಶವಿಲ್ಲ. ಆದ್ದರಿಂದ ಮಂಜೂರು ಮಾಡುವ ಪ್ರಶ್ನೆ ಉದ್ಭವಿಸುವುದಿಲ್ಲ.

ಇ) ಈ ಜಮೀನುಗಳ ಸಕ್ರಮೀಕರಣಕ್ಕೆ ಕುರಿತಂತೆ ರಚಿಸಲಾಗಿದ್ದ ಸಚಿವ ಸಂಪುಟದ ಉಪ ಸಮಿತಿಯು ನೀಡಿರುವ ವರದಿಯನ್ನು ಸರ್ಕಾರವು ಪರಿಶೀಲಿಸುತ್ತಿದ್ದು, ಶೀಘ್ರವೇ ಅಗತ್ಯ ಕ್ರಮ ತೆಗದುಕೊಳ್ಳಲಾಗುವುದು.

ಸುಳ್ಯ ವಿಧಾನ ಸಭಾಕ್ಷೇತ್ರದಲ್ಲಿ ರುದ್ರಭೂಮಿಗಳು

1926 - ಶ್ರೀ ಎಸ್. ಅಂಗಾರ (ಸುಳ್ಯ) : ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಸುಳ್ಯ ವಿಧಾನ ಸಭಾಕ್ಷೇತ್ರದ ಎಷ್ಟು ಗ್ರಾಮಗಳಲ್ಲಿ ರುದ್ರ ಭೂಮಿಗಳು ಇವೆ?*